# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಎಂ. ಸಿದ್ದರಾಜು, ಗ್ರಾಮ ಪಂಚಾಯತಿ ಅಧ್ಯಕ್ಷರು, ಹುಲಿಕೆರೆ ಗ್ರಾಮ ಪಂಚಾಯತಿ, ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ, ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್(ತಿದ್ದುಪಡಿ) ಅಧಿನಿಯಮ 2020 ರ ಪ್ರಕರಣ 43(ಎ)(vi) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಅಪರ ಪೊಲೀಸ್ ಮಹಾ ನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ಇವರ ಪತ್ರ ಸಂಖ್ಯೆ:ಎಸಿಬಿ/ಮಂಡ್ಯ/ಮೊ.ಸಂ.04/2016, ದಿನಾಂಕ:27.12.2016.
2. ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 46 ಗ್ರಾಪಂಅ 2017, ದಿನಾಂಕ:10.01.2017.
3. ಶ್ರೀ ಎಂ.ಸಿದ್ದರಾಜು, ಇವರ ಲಿಖಿತ ಹೇಳಿಕೆ ದಿನಾಂಕ:08.02.2017.
4. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 46 ಗ್ರಾಪಂಅ 2017, ದಿನಾಂಕ:24.08.2017.
5. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 147 ಗ್ರಾಪಂನ್ಯಾ 2017, ದಿನಾಂಕ:06.06.2019.
6. ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ ಸಂಖ್ಯೆ: ಗ್ರಾಅಪ 46 ಗ್ರಾಪಂಅ 2017, ದಿನಾಂಕ:31.07.2019, 06.09.2019, 18.09.2019, 18.10.2019, 12.11.2019, 21.11.2019, 16.12.2019, 20.12.2019, 22.01.2020, 26.02.2020, 09.03.2020, 20.03.2020, 27.04.2020, 04.05.2020, 21.05.2020, 28.05.2020, 09.06.2020, 19.06.2020, 25.06.2020, 19.11.2020, 08.12.2020, ಮತ್ತು 22.12.2020.

ಶ್ರೀ ಸಿ.ಎಂ. ಸಿದ್ದರಾಜು, ಗ್ರಾಮ ಪಂಚಾಯತಿ ಅಧ್ಯಕ್ಷರು, ಹುಲಿಕೆರೆ ಗ್ರಾಮ ಪಂಚಾಯತಿ, ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ, ಇವರು ಟೆಕ್‌ಪ್ರೇಕ್ಸ್ ಸಾಫ್ಟ್‌ವೇರ್ ಪ್ರೈವೇಟ್ ಲಿ. ಮೈಸೂರು ಇವರಿಂದ ಹುಲಿಕೆರೆ ಗ್ರಾಮ ಪಂಚಾಯತಿ ಕಾರ್ಯಾಲಯಕ್ಕೆ ಸಿಸಿ ಕ್ಯಾಮರ ಅಳವಡಿಸಿದ್ದ ಬಿಲ್ಲಿನ ಮೊತ್ತ ರೂ.12,072/- ಗಳನ್ನು ಪಾವತಿ ಮಾಡಲು ರೂ.2,000/- ಲಂಚದ ಬೇಡಿಕೆ ಇಟ್ಟು, ಈ ಬಗ್ಗೆ ದಿನಾಂಕ:05.12.2016 ರಂದು ಟ್ರಾಪ್ ಹಣದೊಂದಿಗೆ ದಸ್ತಗಿರಿ ಮಾಡಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿರುತ್ತದೆ. ಆದ್ದರಿಂದ, ಸದರಿಯವರ ಸದಸ್ಯತ್ವವನ್ನು ರದ್ದುಗೊಳಿಸುವ ಕುರಿತು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ ಅಪರ ಪೊಲೀಸ್ ಮಹಾ ನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ಎಫ್.ಐ.ಆರ್ ಪ್ರತಿಯನ್ನು ಲಗತ್ತಿಸಿ, ಮೇಲೆ ಓದಲಾದ (1)ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಆಪಾದಿತ ಹಿಂದಿನ ಅಧ್ಯಕ್ಷರಾದ ಶ್ರೀ ಎಂ. ಸಿದ್ದರಾಜು, ರವರಿಗೆ ಮೇಲೆ ಓದಲಾದ (2)ರಲ್ಲಿ ಕಾರಣ ಕೇಳುವ ನೋಟೀಸ್ ಜಾರಿ ಮಾಡಿ ಮೇಲೆ ಓದಲಾದ (3)ರಲ್ಲಿ ಲಿಖಿತ ಹೇಳಿಕೆಯನ್ನು ಪಡೆದು ಮೇಲೆ ಓದಲಾದ (4)ರ ಸರ್ಕಾರದ ಆದೇಶದಲ್ಲಿ ಸದರಿಯವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 48(4)ರನ್ವಯ ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲ್ಲೂಕು ಹುಲಿಕೆರೆ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಸ್ಥಾನದಿಂದ ತೆಗೆದುಹಾಕಲಾಗಿತ್ತು.

ಮೇಲೆ ಓದಲಾದ (4)ರ ಆದೇಶದ ವಿರುದ್ಧ ಆದೇಶವನ್ನು ಪ್ರಶ್ನಿಸಿ ಶ್ರೀ ಎಂ.ಸಿದ್ದರಾಜು ರವರು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:42203/2017ನ್ನು ದಾಖಲಿಸಿದ್ದು, ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 04.04.2019 ರ ತೀರ್ಪಿನಲ್ಲಿ ಶ್ರೀ ಸಿ.ಎಂ. ಸಿದ್ದರಾಜು ರವರನ್ನು ಅಧ್ಯಕ್ಷ ಸ್ಥಾನದಿಂದ

...2

ವಜಾಗೊಳಿಸಿದ್ದ ಆದೇಶವನ್ನು ರದ್ದುಗೊಳಿಸಿ, ಆಪಾದಿತ ಅಧ್ಯಕ್ಷರನ್ನು ಪುನರ್ ನೇಮಕ ಮಾಡುವಂತೆ ಹಾಗೂ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ರವರಿಗೆ ವಿಚಾರಣೆಯನ್ನು ಮುಂದುವರೆಸುವಂತೆ ಆದೇಶಿಸಿರುತ್ತದೆ.

ಮಾನ್ಯ ಉಚ್ಚ ನ್ಯಾಯಾಲಯದ ತೀರ್ಪಿನಂತೆ ಮೇಲೆ ಓದಲಾದ (5)ರಲ್ಲಿ ಶ್ರೀ ಎಂ.ಸಿದ್ದರಾಜು ಇವರನ್ನು ಹುಲಿಕೆರೆ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಸ್ಥಾನಕ್ಕೆ ಪುನರ್ ನೇಮಕ ಮಾಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ (5)ರ ಆದೇಶದ ವಿರುದ್ಧ ಶ್ರೀ ರಾಮಕೃಷ್ಣ ಬಿನ್ ಕರಿಯಪ್ಪ, ಅಧ್ಯಕ್ಷರು, ಹುಲಿಕೆರೆ ಗ್ರಾಮ ಪಂಚಾಯಿತಿ, ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ ಇವರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:-28413/2019ನ್ನು ದಾಖಲಿಸಿದ್ದು, ಈ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ:03.09.2019 ರಂದು ನೀಡಿದ ತೀರ್ಪಿನಲ್ಲಿ ಶ್ರೀ ಎಂ.ಸಿದ್ದರಾಜು ಇವರ ವಿರುದ್ಧ ವಿಚಾರಣೆಯನ್ನು 10 ವಾರಗಳೊಳಗಾಗಿ ಮುಕ್ತಾಯಗೊಳಿಸುವಂತೆ ಆದೇಶಿಸಿರುತ್ತದೆ.

ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:42203/2017ರ ದಿನಾಂಕ:04.04.2019ರ ತೀರ್ಪಿನನ್ವಯ ವಿಚಾರಣೆಯನ್ನು ಮುಂದುವರೆಸಲಾಗಿದ್ದು, ಮೇಲೆ ಓದಲಾದ (6)ರಂತೆ ವಿಚಾರಣೆಗೆ ಹಾಜರಾಗಲು ತಿಳುವಳಿಕೆ ನೋಟೀಸ್‌ನ್ನು ಜಾರಿ ಮಾಡಲಾಗಿದೆ ಹಾಗೂ ಪ್ರಕರಣವನ್ನು ಪ್ರಧಾನ ಕಾರ್ಯದರ್ಶಿಯವರ ಅರೆನ್ಯಾಯಿಕ ನ್ಯಾಯಾಲಯದಲ್ಲಿ ದಿನಾಂಕ:14.08.2019, 06.09.2019, 18.09.2019, 15.10.2019, 06.11.2019, 13.01.2020, 05.03.2020, 02.06.2020, 23.06.2020, 26.11.2020 ಮತ್ತು ಅಂತಿಮವಾಗಿ ದಿನಾಂಕ:06.01.2021 ರಂದು ವಿಚಾರಣೆಗೆ ಒಳಪಡಿಸಲಾಗಿದೆ.

ಆಪಾದಿತ ಹಿಂದಿನ ಅಧ್ಯಕ್ಷರಾದ ಶ್ರೀ ಸಿ.ಎಂ. ಸಿದ್ದರಾಜುರವರು ದಿನಾಂಕ:06.01.2021, 17.12.2020, 06.11.2020 ರಂದು ನಡೆದ ವಿಚಾರಣೆಗಳಿಗೆ ಹೊರತುಪಡಿಸಿ, ಉಳಿದ ದಿನಾಂಕಗಳಂದು ನಡೆದ, ವಿಚಾರಣೆಗಳಿಗೆ ಹಾಜರಾಗಿದ್ದು, ಸದರಿಯವರಿಗೆ ಅಹವಾಲು ಹೇಳಿಕೊಳ್ಳಲು ಸಾಕಷ್ಟು ಅವಕಾಶಗಳನ್ನು ನೀಡಲಾಗಿದೆ.

ಆದರೆ, ಶ್ರೀ ಸಿ.ಎಂ. ಸಿದ್ದರಾಜುರವರು ತಮ್ಮ ಮೇಲಿನ ಆರೋಪಗಳನ್ನು ನಿರಾಕರಿಸುವಂತಹ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ಹಾಗೂ ಪೂರಕವಾದಂತಹ ಯಾವುದೇ ದಾಖಲೆಗಳನ್ನು ಸರ್ಕಾರಕ್ಕೆ ಸಲ್ಲಿಸಿರುವುದಿಲ್ಲ.

ಅಪರ ಪೊಲೀಸ್ ಮಹಾ ನಿರ್ದೇಶಕರ, ಕಛೇರಿ ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ಇವರ ವರದಿಯನ್ನು ಪರಿಶೀಲಿಸಲಾಗಿ, ಆರೋಪಿತರನ್ನು ಪ್ರಸ್ತುತ ಇರುವ ಹುದ್ದೆಯಲ್ಲಿಯೇ ಮುಂದುವರೆಸಿದ್ದೇ ಆದಲ್ಲಿ, ಸದರಿ ಇವರು ಈ ಪ್ರಕರಣದ ತನಿಖೆಗೆ ಅವಶ್ಯವಿರುವ ದಾಖಲಾತಿಗಳನ್ನು ನಾಶಪಡಿಸುವ ಅಥವಾ ತಿರುಚುವ ಸಾಧ್ಯತೆಗಳಿರುತ್ತವೆ ಹಾಗೂ ತನ್ನ ಹುದ್ದೆಯ ಪ್ರಭಾವವನ್ನು ಬಳಸಿಕೊಂಡು ಪ್ರಕರಣದ ಫಿರ್ಯಾದಿ ಹಾಗೂ ಇತರೆ ಸಾಕ್ಷಿದಾರರಿಗೆ ಬೆದರಿಕೆ ಒಡ್ಡುವ ಮೂಲಕ ತನಿಖೆಯ ದಿಕ್ಕನ್ನು ತಪ್ಪಿಸಲು ಪ್ರಯತ್ನಿಸುವ ಸಾಧ್ಯತೆಗಳಿರುತ್ತವೆ ಎಂದು ತಿಳಿಸಿರುತ್ತಾರೆ. ಅಲ್ಲದೇ ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ:21418/2019ರಲ್ಲಿ ದಿನಾಂಕ: 03.09.2019 ರಂದು ನೀಡಿರುವ ತೀರ್ಪಿನಲ್ಲಿ ಪ್ರಕರಣವನ್ನು ಹತ್ತು ವಾರಗಳ ಒಳಗಾಗಿ ಇತ್ಯರ್ಥಗೊಳಿಸುವಂತೆ ಆದೇಶಿಸಿದ್ದು, ಅದರಂತೆ ತೀರ್ಪನ್ನು ಪಾಲಿಸಬೇಕಾಗಿರುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಅಧಿನಿಯಮ ಪ್ರಕರಣ 48(4) ಮತ್ತು 48(5) ರಡಿ ಸದರಿ ಪ್ರಕರಣವನ್ನು ಪರಿಶೀಲಿಸಿದಾಗ, ಗ್ರಾಮ ಪಂಚಾಯತ್‌ನ ಚುನಾಯಿತ

ಅಧ್ಯಕ್ಷರಾಗಿ ಲಂಚದ ಹಣಕ್ಕೆ ಬೇಡಿಕೆ ಇಟ್ಟು ಟ್ರಾಪ್ ಹಣದೊಂದಿಗೆ ದಸ್ತಗಿರಿಯಾಗಿರುವುದು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಅಧಿನಿಯಮ ಪ್ರಕರಣ 43(ಎ) ಹಾಗೂ 48(4)ರಡಿ ದುರ್ನಡತೆ ಹಾಗೂ ಅಧಿಕಾರ ದುರುಪಯೋಗದ ಪ್ರಕರಣವಾಗಿರುತ್ತದೆ. ಹೀಗೆ ಅಧಿಕಾರ ದುರುಪಯೋಗಪಡಿಸಿಕೊಂಡು ದುರ್ನಡತೆ ಎಸಗಿರುವ ಶ್ರೀ ಎಂ. ಸಿದ್ದರಾಜು, ಗ್ರಾಮ ಪಂಚಾಯತಿ ಅಧ್ಯಕ್ಷರು, ಹುಲಿಕೆರೆ ಗ್ರಾಮ ಪಂಚಾಯತಿ, ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ, ಇವರನ್ನು "ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ನಿಯಮ–2020" ರ ಪ್ರಕರಣ 43(ಎ)(vi) ರಡಿ ಮಂಡ್ಯ ಜಿಲ್ಲೆ, ಶ್ರೀರಂಗಪಟ್ಟಣ ತಾಲ್ಲೂಕು, ಹುಲಿಕೆರೆ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಹಾಗೂ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಲು ಸರ್ಕಾರವು ನಿರ್ಧರಿಸಿ, ಅದರಂತೆ ಈ ಕೆಳಕಂಡ ಆದೇಶ

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 46 ಗ್ರಾಪಂಅ 2017,</u>**
**<u>ಬೆಂಗಳೂರು, ದಿನಾಂಕ:22.01.2021.</u>**

ಪ್ರಸ್ತಾವನೆಯಲ್ಲಿನ ವಿವರಗಳ ಹಿನ್ನೆಲೆಯಲ್ಲಿ, ಗ್ರಾಮ ಪಂಚಾಯತ್‌ನ ಚುನಾಯಿತ ಅಧ್ಯಕ್ಷರಾಗಿ ಅಧಿಕಾರ ದುರುಪಯೋಗಪಡಿಸಿಕೊಂಡು ದುರ್ನಡತೆ ಎಸಗಿರುವ ಶ್ರೀ ಎಂ. ಸಿದ್ದರಾಜು, ಹಿಂದಿನ ಗ್ರಾಮ ಪಂಚಾಯತಿ ಅಧ್ಯಕ್ಷರು, ಹುಲಿಕೆರೆ ಗ್ರಾಮ ಪಂಚಾಯತಿ, ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ, ಇವರನ್ನು "ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ನಿಯಮ–2020"ರ ಪ್ರಕರಣ 43(ಎ)(vi) ರಡಿ ಮಂಡ್ಯ ಜಿಲ್ಲೆ, ಶ್ರೀರಂಗಪಟ್ಟಣ ತಾಲ್ಲೂಕು, ಹುಲಿಕೆರೆ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಹಾಗೂ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಿ ಸರ್ಕಾರವು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 22/1/21.
(ನವೀನ್‌ಕುಮಾರ್ ಬಿ.)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.(ಜಿ.ಪಂ.)

<u>ಗೆ:</u>

1) ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ ರಸ್ತೆ, ಕಾಳಿದಾಸ ಮಾರ್ಗ ಬೆಂಗಳೂರು–09
2) ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಮಂಡ್ಯ ಜಿಲ್ಲೆ.
3) ಅಪರ ಪೊಲೀಸ್ ಮಹಾ ನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು.
4) ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ ಶ್ರೀರಂಗಪಟ್ಟಣ, ಮಂಡ್ಯ ಜಿಲ್ಲೆ.
5) ಶ್ರೀ ಎಂ. ಸಿದ್ದರಾಜು, ಹಿಂದಿನ ಗ್ರಾಮ ಪಂಚಾಯತಿ ಅಧ್ಯಕ್ಷರು, ಹುಲಿಕೆರೆ ಗ್ರಾಮ ಪಂಚಾಯತಿ, ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ,
6) ಗಣಕ ಕೋಶ–ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತಕಾರ್ಯದರ್ಶಿ,ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ನಿರ್ದೇಶಕರು(ಪಂ.ರಾಜ್–1), ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
4) ಸರ್ಕಾರಿ ವಕೀಲರು, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.